ಈ) ಸದರಿ ಕೆಲಸಕ್ಕಾಗಿ ಎಷ್ಟು ಹಣ ಮೀಸಲಿಡಲಾಗಿದೆ?

ಉ) ಇಲ್ಲವಾದಲ್ಲಿ ಕಾರಣಗಳೇನು?

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ, ಇ, ಈ ಮತ್ತು ಉ) ಹುಬ್ಬಳ್ಳಿ - ಧಾರವಾಡ ಅವಳಿ ನಗರಗಳಲ್ಲಿ ಎರಡು ಈಜು ಕೊಳಗಳಿದ್ದು ಒಂದು ಧಾರವಾಡದಲ್ಲಿ ಹಾಗೂ ಇನ್ನೊಂದು ಹುಬ್ಬಳ್ಳಿಯಲ್ಲಿದೆ. ಹುಬ್ಬಳ್ಳಿಯಲ್ಲಿರುವ ಈಜು ಕೊಳವನ್ನು ಯುವಜನ ಹಾಗೂ ಕ್ರೀಡಾ ಪ್ರಾಧಿಕಾರಕ್ಕೆ ವಹಿಸಲಾಗಿದೆ. ಆದರೂ ರಾಷ್ಟ್ರ ಮಟ್ಟದ ಈಜು ಕೊಳವನ್ನು ಮಾಡುವ ಬಗ್ಗೆ ಪರಿಶೀಲಿಸಲು ಹುಬ್ಬಳ್ಳಿ-ಧಾರವಾಡ ಪ್ರಾಧಿಕಾರಕ್ಕೆ 5 ಎಕರೆಗಳ ಜಮೀನನ್ನು ನೀಡಲು ಕೋರಲಾಗಿದೆ. ಆದರೆ ಇದಕ್ಕಾಗಿ ಹಣವನ್ನು ಮೀಸಲಾಗಿ ಇಟ್ಟಿಲ್ಲ.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲಾನ್ ಕುರಿತು.

270(228)

ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್, (ಹುಬ್ಬಳ್ಳಿ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲಾನ್ ತಯಾರಿಸಲಾಗಿದೆಯೇ?

ಆ) ಸದರಿ ಮಾಸ್ಟರ್ ಪ್ಲಾನ್ ಪ್ರಕಾರ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಒಟ್ಟು ಎಷ್ಟು ಹಣ ಬೇಕಾಗುತ್ತದೆ?

ಇ) ಮಾಸ್ಟರ್ ಪ್ಲಾನ್ ಸಿದ್ಧಗೊಳಿಸಿದ್ದಲ್ಲಿ ಪ್ರಗತಿಯ ಕಾರ್ಯ ಯಾವ ವರ್ಷದಿಂದ ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಬಿ.ಬಿ.ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಈ ಬಗ್ಗೆ ಅವಳಿ ನಗರಕ್ಕೆ ಸೀಮಿತವಾಗುವಂತೆ ವಿವಿಧ ಸೌಕರ್ಯಗಳ ಅಭಿವೃದ್ಧಿ ಸಲುವಾಗಿ ಬೆಂಗಳೂರು ಮಹಾನಗರದಲ್ಲಿ ರಚಿಸಿರುವಂತೆ ಈ ಅವಳಿ ನಗರಕ್ಕೆ ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಒಂದು ಸಭೆ ನಡೆಸಲಾಗಿದೆ. ಈ ಬಗ್ಗೆ ದಿನಾಂಕ : 5-10-2000 ರಂದು ಒಂದು ಸಭೆಯನ್ನು ಜರುಗಿಸಲಾಗಿದೆ. ಇದು ಪ್ರಗತಿಯಲ್ಲಿದೆ.

ಹುಬ್ಬಳ್ಳಿ-ಧಾರವಾಡ ನಗರ ಪಾಲಿಕೆ ಅಭಿವೃದ್ಧಿ.

271(229)

ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್(ಹುಬ್ಬಳ್ಳಿ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡವನ್ನು ಸರ್ಕಾರದ ಎರಡನೇ ಮಹಾನಗರವೆಂದು ಸರ್ಕಾರ ಗುರುತಿಸಿದೆಯೇ? ಹಾಗಾದಲ್ಲಿ ಬೆಳೆಯುತ್ತಿರುವ ಮಹಾನಗರದ ರಸ್ತೆಗಳು ಮತ್ತು ಒಳಚರಂಡಿ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಲಾಗಿದೆಯೇ?

ಆ) ಬೆಂಗಳೂರು ಮಹಾನಗರ ಪಾಲಿಕೆಗೆ ಪ್ರತಿ ವರ್ಷ ನೀಡುತ್ತಿರುವ ಒಟ್ಟು ಅನುದಾನವೆಷ್ಟು? ಫ್ಲೈಓವರ್:ಸಿಂಗಾಪುರ ನಗರದಂತೆ ಪರಿವರ್ತಿಸಲು ನೀಡಿರುವ ಹಣವೆಷ್ಟು?

ಇ) ಹುಬ್ಬಳ್ಳಿ-ಧಾರವಾಡದ ಅಭಿವೃದ್ಧಿ ದೃಷ್ಟಿಯಿಂದ ಹೆಚ್ಚಿನ ಮಾರ್ಗ ಸಮೀಕ್ಷೆ ಹೊರವಲಯದ ರಚನೆ ಮತ್ತು ವರ್ತುಲ ರಸ್ತೆಯ ಯೋಜನೆ ಹಾಗೂ ಎರಡು ನಗರಗಳ ಮಧ್ಯದಲ್ಲಿ ಜೋಡು ರಸ್ತೆ ನಿರ್ಮಿಸುವ ಯೋಜನೆ ಕೈಗೊಳ್ಳಲು ಸರ್ಕಾರ ತೀರ್ಮಾನಿಸಿದೆಯೇ?

ಶ್ರೀ ಬಿ.ಬಿ.ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ) ಬೆಂಗಳೂರು ಮಹಾನಗರ ಪಾಲಿಕೆಗೆ ಫ್ಲೈ ಓವರ್: ಸಿಂಗಪುರ ನಗರದಂತೆ ಪರಿವರ್ತಿಸಲು ಯಾವುದೇ ಅನುದಾನ ನೀಡಿರುವುದಿಲ್ಲ.